Q-72-(28)

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ-72ರ ಅಡಿಯಲ್ಲಿ ಕೇಳಲಾದ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.

ವಿಷಯ: ಮಂಡ್ಯ ಜಿಲ್ಲಾ ಪಂಚಾಯತಿಯ ಸಾಮಾನ್ಯ ಸಭೆಯ ಕೋರಂ ಅಭಾವದಿಂದ 2019ನೇ ಸೆಪ್ಟೆಂಬರ್ ಮಾಹೆಯಿಂದ ಇದುವರೆವಿಗೂ ನಡೆಸದೆ ಇರುವುದರಿಂದ, ಯಾವುದೇ ಕ್ರಿಯಾಯೋಜನೆಯನ್ನು ಅಥವಾ ಜಿಲ್ಲಾ ಪಂಚಾಯತಿ ಯೋಜನೆಗಳನ್ನು ಅನುಷ್ಠಾನಗೊಳಿಸಿರುವುದಿಲ್ಲ. ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಸಮಗ್ರ ಅಭಿವೃದ್ಧಿ ಕಾರ್ಯಗಳು ಸಂಪೂರ್ಣವಾಗಿ ಸ್ಥಗಿತವಾಗಿರುವುದರಿಂದ, ಸರ್ಕಾರದ ಯಾವುದೇ ಅನುದಾನ ಬಳಕೆಯಾಗಿಲ್ಲ. ಈ ಸಂಬಂಧ ಸರ್ಕಾರವು ಕೂಡ ಯಾವುದೇ ಪರ್ಯಾಯ ಕ್ರಮ ವಹಿಸದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.

ಉತ್ತರ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ರವರು ದಿನಾಂಕ:14-10-2020ರ ಪತ್ರದಲ್ಲಿ, ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯು ದಿನಾಂಕ:25-10-2019, 07-11-2019, 31-01-2020, 27-03-2020 (ಕರೋನ ಪ್ರಯುಕ್ತ), 24-06-2020 ಹಾಗೂ 13-10-2020ರಂದು ಕೋರಂ ಕೊರತೆಯಿಂದ ಮುಂದೂಡಿರುವುದರಿಂದ 2020-21ನೇ ಸಾಲಿನ ಕ್ರಿಯಾ ಯೋಜನೆಯು ಅನುಮೋದನೆಯಾಗಿರುವುದಿಲ್ಲವೆಂದು ಸರ್ಕಾರಕ್ಕೆ ತಿಳಿಸಿರುತ್ತಾರೆ. ದಿನಾಂಕ:07-11-2020ರ ಸರ್ಕಾರದ ಪತ್ರದಲ್ಲಿ ಸ್ಥಾಯಿ ಸಮಿತಿಗಳಿಂದ ಅನುಮೋದನೆಯಾಗಿರುವ ಕ್ರಿಯಾ ಯೋಜನೆಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ನಿರ್ದೇಶನ ನೀಡಲಾಗಿರುತ್ತದೆ. ಅದರಂತೆ, ದಿನಾಂಕ:20-11-2020ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಡ್ಯ ರವರು ಕ್ರಿಯಾ ಯೋಜನೆಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಂದ ಪಡೆದು ಸ್ಥಾಯಿ ಸಮಿತಿಗಳ ಅನುಮೋದನೆಯೊಂದಿಗೆ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುವಾಗ, ಜಿಲ್ಲಾ ಪಂಚಾಯತಿಯ ಅಧ್ಯಕ್ಷರು ಮತ್ತೊಂದು ಪರಿಷ್ಕೃತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿ, ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಕೆಲವೊಂದು ಕ್ಷೇತ್ರಗಳ ಅಭಿವೃದ್ಧಿಗೆ ಸಂಬಂಧಿಸಿದ ಪ್ರಸ್ತಾವನೆಯನ್ನು ಸ್ಥಾಯಿ ಸಮಿತಿಗಳು ಶಿಫಾರಸ್ಸು ಮಾಡಿಲ್ಲದ ಕಾರಣ, ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಗಳನ್ನು ಮಾರ್ಪಾಡಿಸುವಂತೆ ಕೋರಿರುತ್ತಾರೆ. ಸರ್ಕಾರವು ಈ ಎರಡು ಪ್ರಸ್ತಾವನೆಗಳನ್ನು ಪರಿಶೀಲಿಸಿರುತ್ತದೆ. ವಿವಿಧ ಇಲಾಖೆಗಳ ಯೋಜನೆಗಳಡಿಯಲ್ಲಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೆ ಇದ್ದಲ್ಲಿ ಜಿಲ್ಲೆಯ ಅಭಿವೃದ್ಧಿ ಕುಂಠಿತವಾಗುತ್ತದೆ ಎಂದು ಭಾವಿಸಿ, ಮಂಡ್ಯ ಜಿಲ್ಲಾ ಪಂಚಾಯತಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಲ್ಲಿಸಿದ್ದ ಪ್ರಸ್ತಾವನೆಯಲ್ಲಿ ಕೆಲವೊಂದು ಕಾಮಗಾರಿಗಳನ್ನು ಮಾರ್ಪಾಡು ಮಾಡಿ, ಜಿಲ್ಲಾ ಪಂಚಾಯತಿ ಅಧ್ಯಕ್ಷರು ಸೂಚಿಸಿದ ಕೆಲವೊಂದು ಕಾಮಗಾರಿಗಳನ್ನು ಸೇರಿಸಿದ ಪರಿಷ್ಕೃತ ಕ್ರಿಯಾಯೋಜನೆಯನ್ನು ಅನುಷ್ಠಾನ ಮಾಡುವಂತೆ ತಿಳಿಸಿ, ದಿನಾಂಕ:27-01-2021ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯ ರವರಿಗೆ ಕಳುಹಿಸಲಾಗಿರುತ್ತದೆ.

ಸಂಖ್ಯೆ:ಗ್ರಾಅಪಂರಾ 45 ಜಿಪಸ 2021

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ

ಗ್ರಾಮೀಣಾಭಿವೃದ್ಧಿ ಮತ್ತು